# ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ

**ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ :: ಕೇಂದ್ರ ಕಛೇರಿ**

**ಸಂಖ್ಯೆ:ಬೆಂಮಸಾಸಂ/ಕೇಕ/ಮಾಸಂಅ/ಎಸ್‌ಸಿಎಸ್‌ಪಿ:ಟಿಎಸ್‌ಪಿ/ /2022-23 ದಿ: .07.2022**

## ಅಧಿಸೂಚನೆ

2022-23ನೇ ಸಾಲಿನ ಸರ್ಕಾರದ ಅನುದಾನಿತ ಪರಿಶಿಷ್ಟ ಜಾತಿ ಉಪ ಯೋಜನೆಯಡಿ ಉಚಿತವಾಗಿ ಪರಿಶಿಷ್ಟ ಜಾತಿಯ 600 ಅರ್ಹ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಗೆ ಲಘು ವಾಹನ ಮತ್ತು 60 ಅಭ್ಯರ್ಥಿಗಳಿಗೆ ಭಾರಿ ವಾಹನ ಚಾಲನಾ ತರಬೇತಿ ಹಾಗೂ ಗಿರಿಜನ ಉಪ ಯೋಜನೆ (ಟಿ.ಎಸ್.ಪಿ) ಅಡಿಯಲ್ಲಿ ಉಚಿತವಾಗಿ ಪರಿಶಿಷ್ಟ ಪಂಗಡಗಳ 200 ಅರ್ಹ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಗೆ ಲಘು ವಾಹನ ಹಾಗೂ 20 ಅಭ್ಯರ್ಥಿಗಳಿಗೆ ಭಾರಿ ವಾಹನ ಚಾಲನಾ ತರಬೇತಿ ನೀಡುವುದರ ಮೂಲಕ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಚಾಲನಾ ಅನುಜ್ಞಾಪತ್ರ (Driving License) ಒದಗಿಸಿಕೊಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಈ ಕೆಳಕಂಡ ದಾಖಲೆಗಳೊಂದಿಗೆ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

- **ಪರಿಶಿಷ್ಟ ಜಾತಿ ಹಾಗೂ ಪಂಗಡದ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಭಾರಿ ಹಾಗೂ ಲಘು ವಾಹನ ಚಾಲನಾ ತರಬೇತಿಗಾಗಿ ದಿನಾಂಕ:01.08.2022 ರಿಂದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಕೇಂದ್ರ ಕಛೇರಿ, ಶಾಂತಿನಗರ, 3ನೇ ಮಹಡಿ, ಬಿ-ಬ್ಲಾಕ್, ಶಾಂತಿನಗರ ಬಸ್ ನಿಲ್ದಾಣ, ಬೆಂಗಳೂರು-560 027 ಇಲ್ಲಿ ಸಮಯ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 05.00 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ.**

- **ಅರ್ಜಿಸಲ್ಲಿಸಲು ಬೇಕಾದ ಅರ್ಹತೆ ಮತ್ತು ಸಲ್ಲಿಸಬೇಕಾದ ದಾಖಲೆಗಳ ವಿವರ:**

**I. ಲಘು ವಾಹನ ಚಾಲನಾ ತರಬೇತಿ (ಕಾರ್/ಜೀಪ್):**

1. ಕನಿಷ್ಠ 18 ವರ್ಷ ವಯೋಮಿತಿ ತುಂಬಿರಬೇಕು. ಗರಿಷ್ಠ: 45 ವರ್ಷ.
2. ಜನ್ಮ ದಿನಾಂಕದ ಬಗ್ಗೆ ಜನನ ಪ್ರಮಾಣಪತ್ರ ಅಥವಾ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಶಾಲಾ ವರ್ಗಾವಣಾ ಪ್ರಮಾಣ ಪತ್ರ ಅಥವಾ ನೋಟರಿಯಿಂದ ಪ್ರಮಾಣ ಪತ್ರ.
3. ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
4. ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ-5.

**II. ಭಾರಿ ವಾಹನ ಚಾಲನಾ ತರಬೇತಿ (ಬಸ್):**

1. ಕನಿಷ್ಠ 20 ವರ್ಷಗಳ ವಯೋಮಿತಿ ಪೂರೈಸಿರಬೇಕು.
2. ಲಘು ವಾಹನ ಚಾಲನಾ ಅನುಜ್ಞಾಪತ್ರ ಪಡೆದು ಒಂದು ವರ್ಷ ಪೂರೈಸಿರಬೇಕು.
3. ಜನ್ಮ ದಿನಾಂಕದ ಬಗ್ಗೆ ಜನನ ಪ್ರಮಾಣಪತ್ರ ಅಥವಾ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಅಥವಾ ಶಾಲಾ ವರ್ಗಾವಣಾ ಪ್ರಮಾಣ ಪತ್ರ ಅಥವಾ ನೋಟರಿಯಿಂದ ಪ್ರಮಾಣ ಪತ್ರ.
4. ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
5. ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ-5.

❖ **ಅರ್ಹ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ಲಘು/ಭಾರಿ ವಾಹನ ಚಾಲನಾ ತರಬೇತಿ (30 ದಿನಗಳು) ಮತ್ತು ತರಬೇತಿಯ ಅವಧಿಯಲ್ಲಿ ವಸತಿ ಮತ್ತು ಊಟೋಪಚಾರದ ವ್ಯವಸ್ಥೆಯನ್ನು ಉಚಿತವಾಗಿ ನೀಡಲಾಗುತ್ತದೆ.**

**ವ್ಯವಸ್ಥಾಪಕ ನಿರ್ದೇಶಕರು**